**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.</u>**

**<u>ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 1282/2023</u>**

<u>ಪಿರ್ಯಾದಿ</u> ಃ ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

- ವಿರುದ್ಧ -

<u>ಆರೋಪಿ/ತರು</u>ಃ

ಮಂಜುನಾಥ ಬಿನ್ ಲೇಟ್ ರಾಮಸ್ವಾಮಿ, 42 ವರ್ಷ,
ವಾಸ ಃ ಮಾರಿದಿಬ್ಬ ಗ್ರಾಮ, ಲಕ್ಕವಳ್ಳಿ ಹೋಬಳಿ,
ತರೀಕೆರೆ ತಾಲ್ಲೂಕು

****

<u>-ಃದೋಷಾರೋಪಣೆಃ-</u>

ಶ್ರೀಮತಿ ಉರ್ಮಿಳ.ವಿ ಬಿ.ಎ.ಎಲ್., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ವಿರುದ್ದ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 03.04.2023 ರಂದು ರಾತ್ರಿ 07.20 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಸರಹದ್ದಿನ ಮಾರಿದಿಬ್ಬ ಗ್ರಾಮದಲ್ಲಿ ಆರೋಪಿಯಾದ ನೀವು ನಿಮ್ಮ ಮನೆ ಮುಂಭಾಗದಲ್ಲಿ ಒಂದು ಕೆಂಪು ಬಣ್ಣದ ಪ್ಲಾಸ್ಟಿಕ್ ಚೀಲದಲ್ಲಿ ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ರೂ.1,054/- ಬೆಲೆ ಬಾಳುವ 90 ಎಂ.ಎಲ್. ನ ಒರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ 30 ಮದ್ಯ ತುಂಬಿದ ಪೌಚ್ ಗಳನ್ನು ಇಟ್ಟುಕೊಂಡಿದ್ದು, ಆದಕಾರಣ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೆಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ, ಆರೋಪಿಯಾದ ನೀವು ನಿಮ್ಮ ಮನೆ ಮುಂಭಾಗದಲ್ಲಿ ಒಂದು ಕೆಂಪು ಬಣ್ಣದ ಪ್ಲಾಸ್ಟಿಕ್

ಚೀಲದಲ್ಲಿ ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ರೂ.1,054/- ಬೆಲೆ ಬಾಳುವ 90 ಎಂ.ಎಲ್. ನ ಒರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ 30 ಮದ್ಯ ತುಂಬಿದ ಪೌಚ್ ಗಳನ್ನು ಮಾರಾಟ ಮಾಡುವ ಉದ್ದೇಶದಿಂದ ಇಟ್ಟುಕೊಂಡಿದ್ದು, ಆದಕಾರಣ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪಗಳ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ ಃ 07.04.2025

ಸಹಿ
**(ಊರ್ಮಿಳ.ವಿ)**
ಸಿವಿಲ್ ನ್ಯಾಯಾಧೀಶರು ಮತ್ತು
ಹೆಚ್ಚುವರಿ ಪ್ರ.ದ.ನ್ಯಾ.ದಂ., ತರೀಕೆರೆ.